# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
## Karnataka Examinations Authority

ಸಂಖ್ಯೆ: ಇಡಿ/ಕೆಇಎ/ಯುಜಿನೀಟ್/2023 ದಿನಾಂಕ: 01-08-2023

**ಪ್ರಕಟಣೆ**

**ಯುಜಿನೀಟ್-2023 ಕ್ಕೆ ಅರ್ಜಿ ಸಲ್ಲಿಸಲು ಕೊನೆಯ ಹಾಗು ಅಂತಿಮ ಅವಕಾಶ**

**(01-08-2023 ರ ಸಂಜೆ 5.00 ರಿಂದ 02-08-2023 ರಾತ್ರಿ 8.00 ರ ವರೆಗೆ)**

ಯುಜಿನೀಟ್-2023ಕ್ಕೆ ನೊಂದಣಿ ಮಾಡಿಕೊಳ್ಳಲು ಹಲವು ಬಾರಿ ದಿನಾಂಕವನ್ನು ವಿಸ್ತರಿಸದ್ದರೂ, ಅಭ್ಯರ್ಥಿಗಳು ಯುಜಿನೀಟ್-2023 ನೊಂದಣಿಗಾಗಿ ಪ್ರಾಧಿಕಾರವನ್ನು ಕೋರುತ್ತಿದ್ದಾರೆ. ಅಭ್ಯರ್ಥಿಗಳ ಅರ್ಹತೆ ಮತ್ತು ಆಸಕ್ತಿಯನ್ನು ಪರಿಗಣಿಸಿ, ಯುಜಿನೀಟ್-2023 ಕ್ಕೆ ನೊಂದಣಿ ಮಾಡಿಕೊಳ್ಳಲು ಕೊನೆಯ ಹಾಗು ಅಂತಿಮ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ಆನ್‌ಲೈನ್ ಮೂಲಕ ಇಲ್ಲಿಯವರೆಗೆ ನೊಂದಣಿಯನ್ನು ಮಾಡದೆ ಇರುವ ಆಸಕ್ತ ಅರ್ಹ ಅಭ್ಯರ್ಥಿಗಳು 01-08-2023 ರ ಸಂಜೆ 5.00 ರಿಂದ 02-08-2023 ರಾತ್ರಿ 8.00 ರ ವರೆಗೆ ಆನ್‌ಲೈನ್ ಮೂಲಕ ನೊಂದಣಿ ಮಾಡಿ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸಬಹುದಾಗಿರುತ್ತದೆ. ಯುಜಿನೀಟ್-2023 ರ 'ಸಿ' ಮತ್ತು 'ಡಿ' ಅರ್ಹತಾ ಕಂಡಿಕೆಯ ಅಭ್ಯರ್ಥಿಗಳಿಗೆ ಈಗಾಗಲೆ ಎರಡು ಬಾರಿ ಕನ್ನಡ ಭಾಷೆ ಪರೀಕ್ಷೆಯನ್ನು ದಿನಾಂಕ 25-07-2023 ಮತ್ತು 01-08-2023ರಂದು ನಡೆಸಿರುವುದರಿಂದ, ಪ್ರಸ್ತುತ ವಿಸ್ತರಣೆಯಾಗಿರುವ ದಿನಾಂಕಗಳಲ್ಲಿ 'ಸಿ' ಅಥವಾ 'ಡಿ' ಅರ್ಹತಾ ಕಂಡಿಕೆಯನ್ನು ಕ್ಲೇಮ್ ಮಾಡಲು ಅರ್ಹತೆ ಪಡೆಯುವುದಿಲ್ಲ.

ನೊಂದಣಿ ಮಾಡಿ ಅರ್ಜಿ ಸಲ್ಲಿಸುವಿಕೆಯನ್ನು ಪೂರ್ಣ ಮಾಡದೇ ಇರುವ ಅಭ್ಯರ್ಥಿಗಳೂ ಸಹ ಅರ್ಜಿಯನ್ನು ಪೂರ್ಣವಾಗಿ ಭರ್ತಿಮಾಡಿ ಶುಲ್ಕವನ್ನು ಪಾವತಿಸಬಹುದಾಗಿದೆ.

ಯುಜಿನೀಟ್-2023ಕ್ಕೆ ಈ ಮೇಲಿನ ದಿನಾಂಕಗಳಂದು ನೊಂದಣಿ ಮಾಡಿ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸುವ ಅಭ್ಯರ್ಥಿಗಳು ದಿನಾಂಕ 03-08-2023 ರಂದು ಬೆ. 10.00 ಗಂಟೆಗೆ ಪ್ರಾಧಿಕಾರದಲ್ಲಿ ದಾಖಲೆಗಳ ಪರಿಶೀಲನೆಗೆ ಹಾಜರಾಗಬಹುದು.

ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅರ್ಹತೆಯ ಬಗ್ಗೆ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಿಂದ ಪಡೆಯಬಹುದು.

ಯುಜಿನೀಟ್-2023ಕ್ಕೆ ಆನ್‌ಲೈನ್ ಮೂಲಕ ನೊಂದಣಿ ಮಾಡಲು ಮತ್ತು ಅರ್ಜಿ ಸಲ್ಲಿಸಲು ಮತ್ತೊಮ್ಮೆ ದಿನಾಂಕವನ್ನು ವಿಸ್ತರಣೆ ಮಾಡುವುದಿಲ್ಲ. ಯುಜಿನೀಟ್ – 2023 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ವೈದ್ಯಕೀಯ / ದಂತ ವೈದ್ಯಕೀಯ / **ಆಯುರ್ವೇದ, ಯುನಾನಿ, ಹೋಮಿಯೋಪತಿ** ಪದವಿ ಕೋರ್ಸುಗಳ ಪ್ರವೇಶಕ್ಕೆ ಹೆಚ್ಚಿನ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟಿನಿಂದ ಪಡೆಯಬಹುದಾಗಿದೆ.

ಕಾರ್ಯನಿರ್ವಾಹಕ ನಿರ್ದೇಶಕರು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in